ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೩೮

# ಪಟ್ಟಿ – ೧೦

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ : ೨೬ನೇ ಜುಲೈ, ೨೦೧೯

---

## ಸಮೂಹ – V

೧. ಉಪ ಮುಖ್ಯಮಂತ್ರಿಗಳು.

೨. ಗೃಹ ಸಚಿವರು.

೩. ಲೋಕೋಪಯೋಗಿ ಸಚಿವರು.

೪. ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು.

೫. ನಗರಾಭಿವೃದ್ಧಿ ಸಚಿವರು.

೬. ವಸತಿ ಸಚಿವರು.

೭. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

---

## ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧೬ (೭೯೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಬರುವ ಲೋಕೋಪಯೋಗಿ ಇಲಾಖೆಯ ರಸ್ತೆಗಳು ಯಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಮಂಡ್ಯ ಜಿಲ್ಲೆ ವ್ಯಾಪ್ತಿಗೆ ಬರುವ ರಸ್ತೆಗಳನ್ನು ವಿವಿಧ ಯೋಜನೆಯಲ್ಲಿ ಎಷ್ಟು ಮೊತ್ತದಲ್ಲಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗಿದೆ ; (ವರ್ಷವಾರು, ಯೋಜನೆವಾರು ಮಾಹಿತಿ ನೀಡುವುದು)

(ಇ) ಮಂಡ್ಯ ಜಿಲ್ಲೆಯ ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಉದ್ದೇಶವು ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಯಾವ ಯಾವ ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗುವುದು ?

## ಒಂದು ಬಾರಿ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧೭ (೭೯೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳು ಯಾವುವು ; (ಮಾಹಿತಿ ನೀಡುವುದು)

(ಆ) ಪ್ರಸ್ತುತ ಸಾಲಿನಲ್ಲಿ ಎಷ್ಟು ಕಿಲೋಮೀಟರ್ ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಇಲಾಖೆಯು ಯೋಜನೆಯುನ್ನು ರೂಪಿಸಿಕೊಂಡಿರುತ್ತದೆ ; (ಮಂಡ್ಯ ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಸಾಲಿನಲ್ಲಿ ಯೋಜನೆಗೆ ನಿಗದಿಪಡಿಸಿರುವ ಅಂದಾಜು ಮೊತ್ತವೆಷ್ಟು ?

## ಲೋಕೋಪಯೋಗಿ ಇಲಾಖೆಗೆ ಕಾಮಗಾರಿಗಳು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧೮ (೭೯೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ ರಾಜ್ಯ ಹೆದ್ದಾರಿ ಸೇರಿದಂತೆ ಲೋಕೋಪಯೋಗಿ ಇಲಾಖೆಯ ರಸ್ತೆಗಳ ಹಾಗೂ ಕಟ್ಟಡಗಳ ನಿರ್ಮಾಣ ಅಭಿವೃದ್ಧಿ ಹಾಗೂ ನಿರ್ವಹಣೆಗಾಗಿ ೨೦೧೭–೧೮ ರಿಂದ ಪ್ರಸಕ್ತ ಸಾಲಿನವರೆಗೂ ಬಿಡುಗಡೆಗೊಂಡ ಅನುದಾನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; ಕೇಂದ್ರ ರಸ್ತೆ ನಿಗದಿಯಡಿ ಕೈಗೊಂಡ ಕಾಮಗಾರಿಗಳು ಯಾವುವು ; ಹಾಗೂ ಅವುಗಳ ಅನುಷ್ಠಾನ ಪ್ರಕ್ರಿಯೆ ಯಾವ ಹಂತದಲ್ಲಿದೆ ?

## ಯಶಸ್ವಿನಿ ಯೋಜನೆಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೧೯ (೭೯೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ನೇ ಸಾಲಿನಲ್ಲಿ ರಾಜ್ಯದಲ್ಲಿ ಯಶಸ್ವಿನಿ ಯೋಜನೆಯಲ್ಲಿ ನೋಂದಾಯಿಸಿದ ವ್ಯಕ್ತಿಗಳು ಮತ್ತು ಕುಟುಂಬಗಳ ಸಂಖ್ಯೆ ಎಷ್ಟು; ಇವರಿಂದ ತುಂಬಿಸಲ್ಪಟ್ಟ ಪ್ರೀಮಿಯಂ ಹಣ ಎಷ್ಟು ;

(ಆ) ಇದರಲ್ಲಿ ಎಷ್ಟು ಜನ ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿರುತ್ತಾರೆ ; ಇದಕ್ಕೆ ಖರ್ಚಾದ ಮೊತ್ತವೆಷ್ಟು ; (ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಸಾಲಿನಲ್ಲಿ ಈ ಯೋಜನೆ ಮುಂದುವರೆದಿದೆಯೇ ; ಇಲ್ಲದಿದ್ದಲ್ಲಿ, ಮಾಡಿರುವ ಬದಲಿ ವ್ಯವಸ್ಥೆ ಯಾವುದು ? (ವಿವರ ನೀಡುವುದು)

## ರಾಯಚೂರು ನಗರದ ೨೪/೭ ಕುಡಿಯುವ ನೀರಿನ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೨೦ (೭೪೪) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಪಟ್ಟಣಕ್ಕೆ ೨೪/೭ ಕುಡಿಯುವ ನೀರಿನ ಕಾಮಗಾರಿ ಯಾವಾಗ ಪ್ರಾರಂಭವಾಗಿದೆ ;

(ಆ) ಈ ಕಾಮಗಾರಿ ಸ್ಥಗಿತಗೊಂಡ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು ;

(ಈ) ಕಾಮಗಾರಿ ಪೂರ್ಣಗೊಳಿಸದಿರಲು ಕಾರಣಗಳೇನು ;

(ಉ) Amount ಯೋಜನೆಯಲ್ಲಿ ಎಷ್ಟು ಕಾಮಗಾರಿಗಳು ಮಂಜೂರಾಗಿವೆ ;

(ಊ) ಈ ಕಾಮಗಾರಿಗಳು ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಲಿಂಗಸುಗೂರು ಪಟ್ಟಣದ ಒಳಚರಂಡಿ ನಿರ್ಮಾಣದ ಕಾಮಗಾರಿ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೬೨೧ (೮೦೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ಲಿಂಗಸುಗೂರು ಪಟ್ಟಣದಲ್ಲಿ ಒಳಚರಂಡಿ ನಿರ್ಮಾಣ ಮಾಡಲು (UGD Works) ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯ ಲಿಂಗಸುಗೂರು ಪಟ್ಟಣದಲ್ಲಿ ಪ್ರತ್ಯೇಕ ನಗರ ಯೋಜನಾ ಪ್ರಾಧಿಕಾರ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಗೆ ಮಂಜೂರಾತಿಯಾಗಿರುವ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೬೨೨ (೮೦೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರಿನಲ್ಲಿ ಹಾದು ಹೋಗುವ ಎನ್.ಹೆಚ್. ೧೬೭ ರಾಯಚೂರು ನಗರದಿಂದ ಕೃಷ್ಣಾನದಿ ಸೇತುವೆವರೆಗೂ ರಸ್ತೆ ಅಭಿವೃದ್ಧಿಗೊಳಿಸಲು ಹಾಗೂ ಕೃಷ್ಣಾನದಿಯವರೆಗೂ ನೂತನ ಸೇತುವೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೮–೧೯ ಹಾಗೂ ೨೦೧೯–೨೦ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಲೋಕೋಪಯೋಗಿ ಇಲಾಖೆಯ ವಿವಿಧ ಯೋಜನೆಗಳ ಮುಖಾಂತರ ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ನೀಡಿರುವ ಅನುದಾನ ಎಷ್ಟು ? (ಕಾಮಗಾರಿಗಳ ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿರುವ ನೂತನ ಪಟ್ಟಣ ಪಂಚಾಯಿತಿಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೬೨೩ (೮೦೭) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ನೂತನ ಪಟ್ಟಣ ಪಂಚಾಯಿತಿಗಳಾದ ಸಿರವಾರ, ಕವಿತಾಳ, ಹಟ್ಟಿ, ಮಸ್ಕಿಬಳಗಾನೂರ ಇವುಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಜಿಲ್ಲೆಯಲ್ಲಿರುವ ನೂತನ ಪಟ್ಟಣ ಪಂಚಾಯಿತಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯ ಲಿಂಗಸುಗೂರು ಪುರಸಭೆಯನ್ನು ನಗರಸಭೆಯಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮಾಹಿತಿ ತಂತ್ರಜ್ಞಾನ ಕ್ಷೇತ್ರದಿಂದ ಬೆಂಗಳೂರಿನಲ್ಲಿ ಜನದಟ್ಟಣೆ ಹಾಗೂ ಇನ್ನಿತರೆ ಸಮಸ್ಯೆಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೨೪ (೭೪೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾಹಿತಿ ತಂತ್ರಜ್ಞಾನವು ಬೆಂಗಳೂರಿನಲ್ಲಿಯೇ ಕೇಂದ್ರೀಕೃತವಾಗಿದ್ದು, ಇದರಿಂದ ಜನದಟ್ಟಣಿ ಹೆಚ್ಚಾಗಿದ್ದು ನೀರು, ವಿದ್ಯುತ್ ವಾಹನ ದಟ್ಟಣೆ ಹಾಗೂ ಇನ್ನಿತರೆ ಸಮಸ್ಯೆಗಳು ಉಲ್ಬಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ಉತ್ತರ ಭಾಗದಲ್ಲಿ ಈ ತಂತ್ರಜ್ಞಾನದ ಪಾರ್ಕ್‌ಗಳನ್ನು ಸ್ಥಾಪಿಸಿ ಮೂಲಭೂತ ಸೌಕರ್ಯಗಳನ್ನು ಒದಗಿಸುವಲ್ಲಿ ಸರ್ಕಾರದ ನಿಲುವೇನು ;

(ಇ) ಈ ತಂತ್ರಜ್ಞಾನದ ಉದ್ಯೋಗವನ್ನು ರಾಜ್ಯದ ಉತ್ತರ ಭಾಗದ ಉತ್ತೇಜಕವಾದ ಜಿಲ್ಲೆಗಳಿಗೆ ವಿಕೇಂದ್ರಿಕರಿಸುವುದರಿಂದ ಬೆಂಗಳೂರಿಗೆ ಒತ್ತಡ ಕಡಿಮೆಯಾಗುವುದರೊಂದಿಗೆ ರಾಜ್ಯದ ಇತರ ಭಾಗಗಳ ಸಮತೋಲನ ಬೆಳವಣಿಗೆಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಈ) ಇಂತಹದ ವಿಕೇಂದ್ರಿಕರಣದಿಂದ ರಾಜ್ಯದ ಹಿಂದುಳಿದ ಭಾಗವನ್ನು ಅಭಿವೃದ್ಧಿಪಡಿಸುವುದರೊಂದಿಗೆ, ಸ್ಥಳೀಯ ಜನರಿಗೆ ಉದ್ಯೋಗದ ಅವಕಾಶ ದೊರಕಿಸುವುದರೊಂದಿಗೆ ಜನರ ಆರ್ಥಿಕ ಮಟ್ಟವನ್ನು ಸುಧಾರಿಸುವ ಬಗ್ಗೆ ಸರ್ಕಾರ ಯೋಚಿಸಿದೆಯೇ ;

(ಉ) ಹಾಗಿದ್ದಲ್ಲಿ, ಇದರ ರೂಪುರೇಷೆಗಳ ಬಗ್ಗೆ ಮಾಹಿತಿಯನ್ನು ಒದಗಿಸುವುದು ?

## ಪಟ್ಟಣ ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸಿದ ಮೇಲೆ ಅನುದಾನ ನೀಡದಿರುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೨೫ (೭೪೬) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನೂತನವಾಗಿ ಮೇಲ್ದರ್ಜೆಗೇರಿಸಲ್ಪಟ್ಟ ಪಟ್ಟಣ ಪಂಚಾಯತಿಗಳಿಗೆ ದೈನಂದಿನ ಕಾರ್ಯ ನಿರ್ವಹಿಸಲು ಅಗತ್ಯ ಅನುದಾನ ಒದಗಿಸದಿರುವುದರಿಂದ ಹಾಗೂ ಸಿಬ್ಬಂದಿಗಳ ಕೊರತೆಯಿಂದ ದೈನಂದಿನ ಸಾರ್ವಜನಿಕ ಕೆಲಸ ಕಾರ್ಯಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳಾಗಿ ಮೇಲ್ದರ್ಜೆಗೇರಿಸಿದ ಮೇಲೆ ಇಲ್ಲಿಯವರೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು ; (ಪಟ್ಟಣ ಪಂಚಾಯತಿವಾರು, ವರ್ಷಾವಾರು ವಿವರ ನೀಡುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ನೂತನ ಪಟ್ಟಣ ಪಂಚಾಯತಿಗಳಿಗೆ ಅವಶ್ಯವಿರುವ ಸಿಬ್ಬಂದಿಯನ್ನು ಒದಗಿಸಲಾಗಿದೆಯೇ ; ಒದಗಿಸಿರುವ ಹಾಗೂ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಬಗ್ಗೆ ಪಟ್ಟಣ ಪಂಚಾಯತಿವಾರು ವಿವರ ನೀಡುವುದು;

(ಈ) ಖಾಲಿ ಇರುವ ಹುದ್ದೆಗಳಿಗೆ ಯಾವ ಕಾಲಮಿತಿಯಲ್ಲಿ ನೇಮಕಾತಿಗಳನ್ನು ಮಾಡಲಾಗುವುದು ; ಹಾಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೆ ಪೂರ್ಣ ಪ್ರಮಾಣದ ವೇತನ ನೀಡಲಾಗುತ್ತಿದೆಯೇ ; ವೇತನ ನೀಡುವಲ್ಲಿ ವಿಳಂಬವಾಗಿದ್ದರೆ, ಅದಕ್ಕೆ ಕಾರಣಗಳೇನು ;

(ಉ) ಮೇಲ್ದರ್ಜೆಗೇರಿಸಿದ ಪುರಸಭೆ, ಪಟ್ಟಣ ಪಂಚಾಯತಿಗಳಿಗೆ ಯಾವ ಕಾಲಮಿತಿಯಲ್ಲಿ ಸಂಪೂರ್ಣ ಮೂಲಭೂತ ಸೌಲಭ್ಯಗಳನ್ನು ಹಾಗೂ ಅತ್ಯಗತ್ಯವಿರುವ ಅನುದಾನವನ್ನು ಒದಗಿಸಲಾಗುವುದು? (ವಿವರ ನೀಡುವುದು)

## ರಾಜ್ಯದಲ್ಲಿ ನಕಲಿ ವೋಟರ್ ಐಡಿ, ಆಧಾರ್ ಕಾರ್ಡ್, ಜನನ ಪ್ರಮಾಣ ಪತ್ರಗಳನ್ನು ತಯಾರು ಮಾಡಿ ಬಾಂಗ್ಲಾದೇಶದ ನಾಗರಿಕರಿಗೆ ಮಾರಾಟ ಮಾಡುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೭೨೬ (೭೪೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಕ್ರಮವಾಗಿ ನಕಲಿ ವೋಟರ್ ಐಡಿ, ಆಧಾರ್‌ಕಾರ್ಡ್, ಜನನ ಪ್ರಮಾಣ ಪತ್ರಗಳನ್ನು ತಯಾರಿಸಿ ಬಾಂಗ್ಲಾದೇಶದ ನಾಗರಿಕರಿಗೆ ಮಾರಾಟ ಮಾಡುತ್ತಿರುವ ಡಿಜಿಟಲ್ ಅಡ್ಡೆಗಳ ಹಾವಳಿ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈವರೆಗೆ ಎಷ್ಟು ನಕಲಿ ಡಿಜಿಟಲ್ ಅಡ್ಡೆಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಬೆಳಗಾವಿ ಜಿಲ್ಲೆಯ ಗಡಿ ಭಾಗಗಳಲ್ಲಿ ಕಾನೂನು ಬಾಹಿರವಾಗಿ ನಕಲಿ ಸರ್ಕಾರಿ ದಾಖಲೆಗಳನ್ನು ವಿತರಿಸುತ್ತಿರುವ ಯಾವ ಯಾವ ಡಿಜಿಟಲ್ ಅಡ್ಡೆಗಳನ್ನು ಗುರುತಿಸಲಾಗಿದೆ ; ಅವುಗಳ ವಿರುದ್ಧ ಏನೇನು ಕಾನೂನು ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ಈವರೆಗೆ ಎಷ್ಟು ಪ್ರಮಾಣದ ನಕಲಿ ಸರ್ಕಾರಿ ದಾಖಲೆಗಳನ್ನು ವಿತರಿಸಲಾಗಿದೆ ;

(ಉ) ಬೆಳಗಾವಿ ಗಡಿ ಪ್ರದೇಶದಿಂದ ಈವರೆಗೆ ಎಷ್ಟು ಮಂದಿ ಅಕ್ರಮ ಬಾಂಗ್ಲಾ ವಲಸಿಗರನ್ನು ಗಡಿಪಾರು ಮಾಡಲಾಗಿದೆ ; ಎಷ್ಟು ಪ್ರಮಾಣದ ನಕಲಿ ಸರ್ಕಾರಿ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ ? (ವಿವರ ನೀಡುವುದು)

## ಕರ್ನಾಟಕ ಗೃಹ ನಿರ್ಮಾಣ ಮಂಡಳಿಯಿಂದ ಮನೆಗಳನ್ನು ನಿರ್ಮಿಸುವ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೬೨೭ (೭೫೩) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲಾ ಕೇಂದ್ರ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ EWS, LIG, MIG ಮತ್ತು HIG ಮನೆಗಳನ್ನು ನೂತನವಾಗಿ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ವಿಜಯಪುರ ಜಿಲ್ಲಾ ಕೇಂದ್ರ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಈ ಸಂಬಂಧ ಜಮೀನನ್ನು ಗುರುತಿಸಲಾಗಿದೆಯೇ;

(ಇ) ಜಮೀನನ್ನು ಗುರುತಿಸಲಾಗಿದ್ದಲ್ಲಿ, EWS, LIG, MIG ಮತ್ತು HIG ಮನೆಗಳನ್ನು ಯಾವಾಗ ನಿರ್ಮಿಸಲಾಗುವುದು ; ಈ ಸಂಬಂಧ ಫಲಾನುಭವಿಗಳಿಂದ ಬಂದಿರುವ ಅರ್ಜಿಗಳೆಷ್ಟು ? (ವಿವರಗಳನ್ನು ಒದಗಿಸುವುದು)

## ಬೃಹತ್ ಬೆಂಗಳೂರು ಪಾಲಿಕೆ ವ್ಯಾಪ್ತಿಯ ಅಕ್ರಮ ಜಮೀನಿನ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೭೨೮ (೭೫೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನೌಕರರ ಕ್ಷೇಮಾಭಿವೃದ್ಧಿ ಸಂಘಕ್ಕೆ ಲಿಂಗಧೀರನಹಳ್ಳಿ ಗ್ರಾಮದ ಸರ್ವೆ ನಂ. ೧/೪, ೭/೧, ೭/೫, ೭/೬, ೭/೮ ಮತ್ತು ೭/೯ ರಲ್ಲಿರುವ ಜಮೀನುಗಳನ್ನು ನೋಂದಾಯಿತ ಕ್ರಯಪತ್ರ ಮಾಡಿಕೊಡದೆ, ಸದರಿ ಜಮೀನುಗಳನ್ನು ಪರಿಷ್ಕೃತ ಬಡಾವಣೆ ನಕ್ಷೆಯಲ್ಲಿ ಸೇರಿಸಲು ಅವಕಾಶವಿದೆಯೇ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ನೋಂದಾಯಿತ ಕ್ರಯಪತ್ರ ಮಾಡಿಕೊಡದೆ ಪರಿಷ್ಕೃತ ಬಡಾವಣೆ ನಕ್ಷೆಯಲ್ಲಿ ಅಕ್ರಮವಾಗಿ ಸೇರಿಸಿರುವವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಪ್ರಾಧಿಕಾರದ ನಿಯಮಾವಳಿಗಳನ್ವಯ ಸಿ.ಎ. ನಿವೇಶನಗಳನ್ನು ಹಂಚಿಕೆ ಮಾಡಲು ಕೈಗೊಳ್ಳುವ ಪ್ರಕ್ರಿಯೆಯ ವಿಧಾನಗಳನ್ನು ತಿಳಿಸುವುದು ಮತ್ತು ನಿಯಮದ ಪ್ರತಿ ಒದಗಿಸುವುದು ;

(ಈ) ಲಿಂಗಧೀರನಹಳ್ಳಿ ಬಡಾವಣೆಯ ಸುಮಾರು ಒಂದು ಎಕರೆ ವಿಸ್ತೀರ್ಣದ ಸಿ.ಎ. ನಿವೇಶನವನ್ನು ಯಾರಿಗೆ ಹಂಚಿಕೆ ಮಾಡಲಾಗಿದೆ? (ಪ್ರಾಧಿಕಾರದ ಮಂಡಳಿ ಸಭೆಯಲ್ಲಿ ಅನುಮತಿಸಿದ ಠರಾವಿನ ಪ್ರತಿ ಮತ್ತು ಗುತ್ತಿಗೆ ಕರಾರುಪತ್ರ ಒದಗಿಸುವುದು)

## ರಸ್ತೆ ಅಭಿವೃದ್ಧಿ ಬಗ್ಗೆ ವಿವರ ನೀಡುವ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೬೨೯ (೭೫೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಿಂದ ಇಲ್ಲಿಯವರೆಗೆ ವಿಜಯಪುರ ಜಿಲ್ಲೆಗೆ ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದ ರಾಷ್ಟ್ರೀಯ ಹೆದ್ದಾರಿಗಳು, ಜಿಲ್ಲಾ ಮುಖ್ಯ ರಸ್ತೆಗಳು ಹಾಗೂ ತಾಲ್ಲೂಕು ಮುಖ್ಯ ರಸ್ತೆಗಳ ದುರಸ್ಥಿ, ಡಾಂಬರೀಕರಣ ಹಾಗೂ ಅಭಿವೃದ್ಧಿಗಾಗಿ ಬಿಡುಗಡೆಯಾಗಿರುವ ಅನುದಾನ ಎಷ್ಟು ; (ವಿವರವನ್ನು ಒದಗಿಸುವುದು)

(ಆ) ಬಿಡುಗಡೆಯಾಗಿರುವ ಅನುದಾನದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳಾವುವು ; (ವಿವರ ಒದಗಿಸುವುದು)

(ಇ) ಅನುದಾನ ಬಿಡುಗಡೆಯಾಗಿದ್ದರೂ ಯಾವ ಕಾರಣಕ್ಕಾಗಿ ಕಾಮಗಾರಿಗಳನ್ನು ಇದುವರೆವಿಗೂ ಅನುಷ್ಠಾನಗೊಳಿಸಿರುವುದಿಲ್ಲ? (ಮಾಹಿತಿ ಒದಗಿಸುವುದು)

## ಮೂಲಸೌಕರ್ಯ ಒದಗಿಸುವ ಕುರಿತು

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು):–**

೬೩೦ (೭೫೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಿಂದ ಇಲ್ಲಿಯವರೆವಿಗೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಾವುವು ; (ವಿವರ ಒದಗಿಸುವುದು)

(ಆ) ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮಂಡಳಿ ವತಿಯಿಂದ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಾವುವು? (ವಿವರ ಒದಗಿಸುವುದು)

## ನಗರ ಯೋಜನೆ ಇಲಾಖೆಯಿಂದ ನಿಯೋಜನೆ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೧ (೮೦೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ನಗರ ಯೋಜನೆ ಇಲಾಖೆಯಿಂದ ನಿಯೋಜನೆಗೊಂಡು ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ನಗರ ಯೋಜನೆ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿಗಳ ಶೈಕ್ಷಣಿಕ ವಿವರಗಳೇನು ;

(ಇ) ನಗರ ಯೋಜನೆಯಲ್ಲಿ ಶೈಕ್ಷಣಿಕ ಅರ್ಹತೆ/ಪ್ರಾವೀಣ್ಯತೆ ಇರದಿರುವ ಅಧಿಕಾರಿಗಳು ನಗರ ಯೋಜನೆ ವಿಭಾಗದಲ್ಲಿ ಕಾರ್ಯ ನಿರ್ವಹಿಸಬಹುದೆ ;

(ಈ) ಈ ಬಗ್ಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ಸೇವಾ ನಿಯಮಗಳೇನು ?

## ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮನೆಗಳ ನಿರ್ಮಾಣದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೨ (೮೧೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಕರ್ನಾಟಕ ರಾಜ್ಯದಲ್ಲಿ ಮನೆ ನಿರ್ಮಾಣಕ್ಕಾಗಿ ಅನುಮೋದನೆಯಾದ ಯೋಜನೆಗಳಾವುವು ;

(ಆ) ಈ ಯೋಜನೆಯಡಿಯಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಕಳೆದ ೫ ವರ್ಷಗಳಲ್ಲಿ ಶಿವಮೊಗ್ಗ ಜಿಲ್ಲೆಗೆ ವಸತಿ ಇಲಾಖೆಯಡಿಯಲ್ಲಿ ವಸತಿಗಳ ಬಗ್ಗೆ

**ಶ್ರೀ ಆರ್ ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೩ (೮೦೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಐದು ವರ್ಷಗಳಲ್ಲಿ ಶಿವಮೊಗ್ಗ ಜಿಲ್ಲೆಗೆ ವಸತಿ ಇಲಾಖೆಯಡಿ ಬೇರೆ ಬೇರೆ ಯೋಜನೆಗಳಲ್ಲಿ ಎಷ್ಟು ವಸತಿಗಳನ್ನು ನೀಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಮಂಜೂರಾತಿ ನೀಡಲಾಗಿರುವ ವಸತಿಗಳಲ್ಲಿ ಎಷ್ಟು ಮನೆಗಳು ಸಂಪೂರ್ಣವಾಗಿ ನಿರ್ಮಾಣವಾಗಿರುತ್ತದೆ ; ಅಪೂರ್ಣ ನಿರ್ಮಾಣವಾಗಿರುವ ಮನೆಗಳ ಸಂಖ್ಯೆ ಎಷ್ಟು ;

(ಇ) ಅನುಮತಿ ನೀಡಿರುವ ಮನೆಗಳಿಗೆ ಪೂರ್ಣ ಪ್ರಮಾಣದ ಹಣ ಸಂದಾಯವಾಗಿರುತ್ತದೆಯೇ ; ಪೂರ್ಣ ಪ್ರಮಾಣದ ಹಣ ಸಂದಾಯವಾಗದಿದ್ದಲ್ಲಿ ಉಳಿದ ಹಣ ಸಂದಾಯ ಮಾಡಲು ಯಾವ ಕ್ರಮ ಕೈಗೊಂಡಿರುತ್ತದೆ ?

## ಶಿವಮೊಗ್ಗ ಜಿಲ್ಲೆಯ ಶರಾವತಿ ನದಿಯ ನೀರನ್ನು ಲಿಂಗನಮಕ್ಕಿ ಅಣೆಕಟ್ಟಿನಿಂದ ಬೆಂಗಳೂರು ನಗರಕ್ಕೆ ಸರಬರಾಜು ಮಾಡುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೪(೮೦೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯ ಶರಾವತಿ ನದಿಯ ನೀರನ್ನು ಲಿಂಗನಮಕ್ಕಿ ಅಣೆಕಟ್ಟಿನಿಂದ ಬೆಂಗಳೂರು ನಗರಕ್ಕೆ ಕುಡಿಯುವ ನೀರನ್ನು ಸರಬರಾಜು ಮಾಡಲು ಸರ್ಕಾರ ನಿರ್ಧರಿಸಿದೆಯೇ ;

(ಆ) ಈ ಯೋಜನೆಗೆ ವೆಚ್ಚವಾಗುವ ಮೊತ್ತ ಎಷ್ಟು ;

(ಇ) ಶರಾವತಿ ನದಿ ನೀರನ್ನು ಕೊಳವೆ ಮೂಲಕ ಬೆಂಗಳೂರು ನಗರಕ್ಕೆ ಸರಬರಾಜು ಮಾಡುವಾಗ ದಾರಿಯ ಮಧ್ಯದಲ್ಲಿರುವ ಗ್ರಾಮಗಳಿಗೆ ಹಾಗೂ ಪಟ್ಟಣಗಳಿಗೆ ನೀರನ್ನು ಸರಬರಾಜು ಮಾಡಲಾಗುತ್ತಿದೆಯೇ;

(ಈ) ಈ ಯೋಜನೆಯ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು ಯಾವಾಗ ;

(ಉ) ಮಲೆನಾಡಿನಲ್ಲಿ ಕುಡಿಯುವ ನೀರಿಗೆ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಈ ಯೋಜನೆಯ ಸಂಪೂರ್ಣ ವರದಿಯನ್ನು ನೀಡುವುದು ?

## ಸ್ಮಾರ್ಟ್‌ಸಿಟಿ ಕಂಪನಿಯ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೫ (೮೦೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ಮಾರ್ಟ್‌ಸಿಟಿ ಕಂಪನಿಯ ಯೋಜನೆಯಡಿ ಬಿಡುಗಡೆಯಾದ ಅನುದಾನದಲ್ಲಿ ಯಾರ ಸಲಹೆ ಮೇರೆಗೆ ಕಾಮಗಾರಿ ಕೈಗೊಳ್ಳಲಾಗುತ್ತಿದೆ ; ಸ್ಥಳೀಯ ಚುನಾಯಿತ ವಾರ್ಡ್ ಸದಸ್ಯರ ಗಮನಕ್ಕೆ ತರದೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆಯೇ ; ಈ ಬಗ್ಗೆ ಸ್ಥಳೀಯ ಸಂಸ್ಥೆಯ ಜೊತೆ ಚರ್ಚಿಸಲಾಗಿದೆಯೇ ; (ವಿವರ ನೀಡುವುದು)

(ಆ) ಸ್ಮಾರ್ಟ್‌ಸಿಟಿ ಕಂಪನಿಯ ಆಡಳಿತ ವ್ಯವಸ್ಥೆಗೆ ಒಂದು ಕಂಪನಿಗೆ ತಿಂಗಳೊಂದಕ್ಕೆ ತಗಲುವ ವೆಚ್ಚವೆಷ್ಟು ; (ವಿವರ ನೀಡುವುದು)

(ಇ) ಸ್ಮಾರ್ಟ್‌ಸಿಟಿಯಲ್ಲಿ ಕೈಗೊಳ್ಳುವ ಕಾಮಗಾರಿ ಮತ್ತು ಸ್ಥಳೀಯ ಆಡಳಿತ ಸಂಸ್ಥೆಗೆ ಸಂಬಂಧ ಇಲ್ಲವೆಂಬ ದೂರುಗಳಿದ್ದು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಶಿವಮೊಗ್ಗ ಮಹಾನಗರ ಪಾಲಿಕೆ ಸ್ಮಾರ್ಟ್‌ಸಿಟಿ ಯೋಜನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ಕೈಗೊಂಡ ಕಾಮಗಾರಿಗಳು ಯಾವುವು ;

(ಉ) ಸ್ಮಾರ್ಟ್‌ಸಿಟಿ ಯೋಜನೆಯಡಿಯಲ್ಲಿ ಕಾಮಗಾರಿಗಳು ಮಂದಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಈ ಯೋಜನೆಯಡಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳಲ್ಲಿ ಕಳಪೆ ಕಾಮಗಾರಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಇದುವರೆಗೂ ಈ ಯೋಜನೆಯಡಿಯಲ್ಲಿ ಎಷ್ಟು ಹಣ ಖರ್ಚಾಗಿರುತ್ತದೆ ?

## ಚಲನಚಿತ್ರ ಮಂದಿರಗಳ ಮೇಲಿನ ತೆರಿಗೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು ) :–**

೬೩೬(೭೩೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನ ಅವಧಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಚಲನಚಿತ್ರ ಮಂದಿರಗಳಿಂದ (film theatre) ಸಂಗ್ರಹಿಸಲಾದ ಎನ್‌ರೋಲ್‌ಮೆಂಟ್ ಮತ್ತು ರಿನೀವಲ್ ತೆರಿಗೆಯ ಮೊತ್ತವೆಷ್ಟು ;

(ಆ) ೨೦೧೬–೧೭ನೇ ಸಾಲಿನ ಅವಧಿಯಲ್ಲಿ ಎಷ್ಟು ಚಲನಚಿತ್ರ ಮಂದಿರಗಳು (film theatre) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಎನ್‌ರೋಲ್‌ಮೆಂಟ್ ಮತ್ತು ರಿನೀವಲ್ ಆಗಿವೆ ;

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ನಗರದಲ್ಲಿರುವ ಚಲನಚಿತ್ರ ಮಂದಿರಗಳ (film theatre) ಸರ್ವೆ ನಡೆಸಿ ಹಾಗೂ ಅವುಗಳಲ್ಲಿರುವ ಸುರಕ್ಷಾ ಕ್ರಮಗಳ ಬಗ್ಗೆ ಪರಿಶೀಲಿಸಿದೆಯೇ ;

(ಈ) ನಗರದ ಚಲನಚಿತ್ರ ಮಂದಿರಗಳಲ್ಲಿ ಆಹಾರ ವಸ್ತುಗಳನ್ನು ಮಾರುಕಟ್ಟೆ ದರಕ್ಕಿಂತ ದುಪ್ಪಟ್ಟು ದರದಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ ಸರ್ಕಾರವು ಕೈಗೊಂಡ ಕ್ರಮವೇನು ?

## ನಗರ ಪ್ರದೇಶಗಳಲ್ಲಿ ವಸತಿ ಯೋಜನೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೩೭(೭೩೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ಸರ್ಕಾರದ ವತಿಯಿಂದ ನಗರ ಪ್ರದೇಶಗಳಲ್ಲಿ ಕೈಗೊಂಡ ವಸತಿ ಯೋಜನೆಗಳ ಪ್ರಮಾಣವೆಷ್ಟು ; ಈ ವಸತಿ

ಯೋಜನೆಗಳ ಮೂಲಕ ಎಷ್ಟು ಮನೆಗಳನ್ನು ವಸತಿ ರಹಿತರಿಗಾಗಿ ನಿರ್ಮಿಸಲು ಯೋಜಿಸಲಾಗಿತ್ತು ; (ಯೋಜನೆವಾರು, ನಗರವಾರು ವಿವರ ನೀಡುವುದು)

(ಆ) ರಾಜ್ಯ ಮತ್ತು ಕೇಂದ್ರ ಸರ್ಕಾರದ ಎಷ್ಟು ವಸತಿ ಯೋಜನೆಗಳನ್ನು ನಗರ ಪ್ರದೇಶದಲ್ಲಿ ಜಾರಿಗೊಳಿಸಲಾಗುತ್ತಿದೆ ; ಈ ವಸತಿ ಯೋಜನೆಗಳ ಮೂಲಕ ನಿರ್ಮಿಸಲಾಗುತ್ತಿರುವ ಮನೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಪೂರ್ಣಗೊಂಡ ವಸತಿ ಯೋಜನೆಗಳ ಸಂಖ್ಯೆ ಎಷ್ಟು ;

(ಇ) ಕಳೆದ ೫ ವರ್ಷಗಳಲ್ಲಿ ನಗರ ಪ್ರದೇಶದ ಬಡವರಿಗೆ ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ವಿತರಿಸಲಾದ ಮನೆಗಳ ಸಂಖ್ಯೆ ಎಷ್ಟು ? (ನಗರದ ಪ್ರದೇಶವಾರು ವಿವರ ನೀಡುವುದು)

## ವಸತಿ ಪ್ರದೇಶಗಳಲ್ಲಿ ವಾಣಿಜ್ಯ ಚಟುವಟಿಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೩೮ (೭೩೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ವ್ಯಾಪ್ತಿಯ ವಸತಿ ಪ್ರದೇಶಗಳಲ್ಲಿ ವಾಣಿಜ್ಯ ಚಟುವಟಿಕೆ ನಡೆಸಲು ಇರುವ ನಿಯಮಗಳೇನು ; ವಸತಿ ಪ್ರದೇಶದಲ್ಲಿರುವ ಅನಧಿಕೃತ ಮಳಿಗೆ ಮುಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಕೋರಮಂಗಲದ ವಸತಿ ಪ್ರದೇಶಗಳಲ್ಲಿ ವಾಣಿಜ್ಯ ಪರವಾನಿಗೆ ಪಡೆದು ವ್ಯವಹಾರ ನಡೆಸುತ್ತಿರುವ ಸಂಸ್ಥೆಗಳ ಸಂಖ್ಯೆ ಎಷ್ಟು ; ವಾಹನ ನಿಲುಗಡೆ ಪ್ರದೇಶದಲ್ಲಿ ವಾಣಿಜ್ಯ ಚಟುವಟಿಕೆ ನಡೆಸುತ್ತಿರುವ ಸಂಸ್ಥೆಗಳ ವಿವರ ನೀಡುವುದು ;

(ಇ) ಕೋರಮಂಗಲ/ ಇಂದಿರಾನಗರ ವಸತಿ ಪ್ರದೇಶದಲ್ಲಿ ವಾಣಿಜ್ಯ ಪರವಾನಿಗೆ ನೀಡಿರುವುದರ ವಿರುದ್ಧ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ನ್ಯಾಯಾಲಯದಲ್ಲಿ ಪ್ರಕರಣ ದಾಖಲಾದ ಮೇಲೆ ವಾಣಿಜ್ಯ ವ್ಯವಹಾರ ನಡೆಸುವುದರ ಪರವಾಗಿ ಯಾವುದೇ ಆದೇಶ ಇರದಿದ್ದರೂ ವಾಣಿಜ್ಯ ವ್ಯವಹಾರ ನಡೆಸುತ್ತಿರುವ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದಲ್ಲಿ ಅನುಷ್ಠಾನಗೊಳ್ಳುತ್ತಿರುವ ಸ್ಮಾರ್ಟ್ ಸಿಟಿ ಯೋಜನೆ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೬೩೯ (೭೨೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದ ಸ್ಮಾರ್ಟ್ ಸಿಟಿ ಯೋಜನೆಯನ್ನು ಕರ್ನಾಟಕದ ಯಾವ ಯಾವ ಸಿಟಿಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ; (ಮಾಹಿತಿ ಒದಗಿಸುವುದು)

(ಆ) ಚಿತ್ರದುರ್ಗ ಸ್ಮಾರ್ಟ್ ಸಿಟಿ ಯೋಜನೆ ಯಾವ ಹಂತದಲ್ಲಿದೆ ; ಇದಕ್ಕಾಗಿ ಖರ್ಚು ಮಾಡಲಾಗಿರುವ ಅನುದಾನ ಎಷ್ಟು ? (ಮಾಹಿತಿ ಒದಗಿಸುವುದು)

## ಮಹದೇವಪುರ ರಸ್ತೆ ಅಗಲೀಕರಣ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೬೪೦ (೭೨೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಬೃಹತ್ ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ ಮಹದೇವಪುರ ೬೦ ಅಡಿ ರಸ್ತೆ ಅಗಲೀಕರಣ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಆ) ರಸ್ತೆ ಅಗಲೀಕರಣಕ್ಕೆ ಬೇಕಾದ ಸ್ಥಳ ಬೆಂಗಳೂರು ಬೃಹತ್ ಮಹಾನಗರ ಪಾಲಿಕೆ ಸುಪರ್ದಿಗೆ ಪಡೆಯಲಾಗಿದೆಯೇ ; ರಸ್ತೆ ಅಗಲೀಕರಣ ವಿಳಂಬಕ್ಕೆ ಕಾರಣವೇನು ? (ಮಾಹಿತಿ ಒದಗಿಸುವುದು)

## ಬೆಂಗಳೂರು ನಗರದ ವಾರ್ಡ್‌ಗಳಲ್ಲಿ ಎಲ್.ಇ.ಡಿ. ಅಳವಡಿಕೆ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೬೪೧ (೭೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಬೃಹತ್ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಲ್.ಇ.ಡಿ. ವಿದ್ಯುತ್ ದೀಪಗಳನ್ನು ಅಳವಡಿಸಬೇಕೆಂಬ ಸರ್ಕಾರದ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಆ) ಇದನ್ನು ಅಳವಡಿಸಲು ಸರ್ಕಾರ ಯಾವ ರೀತಿಯ ಕಾರ್ಯ ಯೋಜನೆ ರೂಪಿಸಿದೆ ; (ಮಾಹಿತಿ ಒದಗಿಸುವುದು)

(ಇ) ಸದರಿ ಯೋಜನೆ ಅನುಷ್ಠಾನ ವಿಳಂಬ ಆಗುತ್ತಿರಲು ಕಾರಣವೇನು? (ಮಾಹಿತಿ ಒದಗಿಸುವುದು)

## ಸೇತುವೆ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸುವ ಬಗ್ಗೆ

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):–**

೬೪೨ (೧೦೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಟೌನಿನ ಅಗ್ರಹಾರದ ಅಭಯ ಆಂಜನೇಯಸ್ವಾಮಿ ದೇವಸ್ಥಾನದ ರಸ್ತೆಯಿಂದ (ವಾರ್ಡ್ ನಂ.೬ ಇಂಡಸ್ಟ್ರಿಯಲ್ ಏರಿಯಾಗೆ ಬಿ.ಎಂ.ರಸ್ತೆಗೆ) ಸಂಪರ್ಕ ಕಲ್ಪಿಸುವ ಅರ್ಕಾವತಿ

ನದಿಗೆ ಅಡ್ಡಲಾಗಿ ನಿರ್ಮಿಸುತ್ತಿರುವ ಸೇತುವೆಗೆ ೨೦೧೨-೧೩ರಲ್ಲಿ ವರ್ಕ್ ಆರ್ಡರ್ ಆಗಿದ್ದು, ಇದುವರೆವಿಗೂ ಕಾಮಗಾರಿ ಪೂರ್ಣಗೊಳ್ಳದಿರಲು ಕಾರಣಗಳೇನು ;

(ಆ) ಸನ್ಮಾನ್ಯ ಮುಖ್ಯಮಂತ್ರಿಗಳ ವಿಧಾನಸಭಾ ಕ್ಷೇತ್ರದಲ್ಲೇ ಒಂದು ಸೇತುವೆಯನ್ನು ನಿರ್ಮಿಸಲು (ಏಳು) ವರ್ಷಗಳ ಧೀರ್ಘಾವಧಿ ತೆಗೆದು ಕೊಂಡಿರುವುದು ಸಮಂಜಸವೇ ;

(ಇ) ಸೇತುವೆ ನಿರ್ಮಾಣ ವಿಳಂಬದಿಂದ ಹಳೆಯ ಟೌನ್ ಬಿ.ಎಂ. ರಸ್ತೆ ಸೇತುವೆಯ ಮೇಲೆ ವಾಹನ ಮತ್ತು ಜನ ಸಂಚಾರ ಒತ್ತಡ ಜಾಸ್ತಿಯಾಗಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಸೇತುವೆ ನಿರ್ಮಾಣ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೇ ?

## ೧೬ ಪಥ ರಸ್ತೆ ಅಭಿವೃದ್ಧಿ

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):-**

೬೪೩ (೭೪೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಕೈಗೊಳ್ಳಲಾಗಿರುವ ೧೬ ಪಥ ರಸ್ತೆ (ಬನ್ನೇರುಘಟ್ಟ ರಸ್ತೆ) ಅಭಿವೃದ್ಧಿ ಕಾಮಗಾರಿಯ ಅಂದಾಜು ಮೊತ್ತದ ಅಂಕಿ ಅಂಶಗಳನ್ನು ನೀಡುವುದು ;

(ಆ) ೧೬ ಪಥದ ಬನ್ನೇರುಘಟ್ಟ ರಸ್ತೆಯ ಉದ್ದ ಮತ್ತು ಅಗಲದ ವಿವರವನ್ನು ನೀಡುವುದು ;

(ಇ) ಕಾಮಗಾರಿ ಕಾರ್ಯಾದೇಶ ಪಡೆದಿರುವ ಸಂಸ್ಥೆಯ ವಿವರ ಹಾಗೂ ಸದರಿ ಸಂಸ್ಥೆಗೆ ಈವರೆವಿಗೂ ಎಷ್ಟು ಮೊತ್ತದ ಬಿಲ್ ಪಾವತಿ ಮಾಡಲಾಗಿದೆ ; (ವಿವರಗಳನ್ನು ನೀಡುವುದು)

(ಈ) ರಸ್ತೆ ಅಭಿವೃದ್ಧಿ ಕಾಮಗಾರಿ ಪೂರ್ಣಗೊಳಿಸಲು ವಿಧಿಸಿರುವ ಕಾಲಮಿತಿ ಎಷ್ಟು ?

## ವಿಧಾನಸೌಧ ಸುತ್ತ ಸಾರ್ವಜನಿಕ ಶೌಚಾಲಯಗಳಿಲ್ಲದಿರುವುದು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):–**

೬೪೪ (೭೩೯) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಶಕ್ತಿ ಕೇಂದ್ರವಾದ ವಿಧಾನಸೌಧ, ವಿಕಾಸಸೌಧ, ಹಾಗೂ ಹೈಕೋರ್ಟ್‌ಗಳನ್ನು ವೀಕ್ಷಿಸಲು ದಿನನಿತ್ಯ ಸಾವಿರಾರು ಜನ ಪ್ರವಾಸಿಗರು ಬಂದುಹೋಗುತ್ತಿದ್ದು ಅವರೆಲ್ಲರ ಅನುಕೂಲಕ್ಕಾಗಿ ವಿಧಾನಸೌಧ ಸುತ್ತಮುತ್ತ ಸಾರ್ವಜನಿಕ ಸುಲಭ ಶೌಚಾಲಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸಾರ್ವಜನಿಕ ಶೌಚಾಲಯಗಳಿಲ್ಲದೆ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಬಗ್ಗೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ?

## ಐ.ಎಂ.ಎ ಪ್ರಕರಣದ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೬೪೫ (೭೨೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಐ.ಎಂ.ಎ ಬೆಂಗಳೂರು ಸಂಸ್ಥೆಯಿಂದ ಎಷ್ಟು ಕೋಟಿ ಹಗರಣವಾಗಿದೆ ;

(ಆ) ಈ ಹಗರಣದಲ್ಲಿ ಯಾರು ಯಾರು ಭಾಗಿಯಾಗಿದ್ದಾರೆ ? (ವಿವರ ನೀಡುವುದು)

## ರಾಜ್ಯದ ಮತ್ತು ಬೀದರ್ ಜಿಲ್ಲೆಯಲ್ಲಿರುವ ವಕ್ಫ್ ಆಸ್ತಿಯ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೬೪೬ (೭೨೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ವಕ್ಫ್ ಮಂಡಳಿಯು ತನ್ನ ಎಷ್ಟು ಎಕರೆ ಭೂಮಿ ಆಸ್ತಿಯನ್ನು ರಕ್ಷಣೆ ಮಾಡಲಾಗಿದೆ ಮತ್ತು ರಾಜ್ಯದಲ್ಲಿ ಎಷ್ಟು ಎಕರೆ ಭೂಮಿ ವಕ್ಫ್ ಆಸ್ತಿಯಾಗಿದೆ ; (ಬೀದರ್ ಜಿಲ್ಲೆಯನ್ನೊಳಗೊಂಡಂತೆ ರಾಜ್ಯಾದ್ಯಂತ ಮಾಹಿತಿ ನೀಡುವುದು)

(ಆ) ವಕ್ಫ್ ಆಸ್ತಿ ಒತ್ತುವರಿ ಮಾಡಿದವರ ಮೇಲೆ ಎಷ್ಟು ದೂರುಗಳು ದಾಖಲಾಗಿವೆ ? (ಸಂಪೂರ್ಣ ಮಾಹಿತಿ ನೀಡುವುದು)

## ಲೋಕೋಪಯೋಗಿ ಇಲಾಖೆ ವ್ಯಾಪ್ತಿಯ ಶೀರ್ಷಿಕೆಯಡಿಯಲ್ಲಿ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೬೪೭ (೭೩೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ಸರ್ಕಾರ ಜಾರಿಯಾದಾಗಿನಿಂದ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಯಾವ ಯಾವ ಲೆಕ್ಕ ಶೀರ್ಷಿಕೆಯಡಿಯಲ್ಲಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; (ಲೆಕ್ಕ ಶೀರ್ಷಿಕೆವಾರು, ವರ್ಷವಾರು, ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ? (ವರ್ಷವಾರು, ವಿಧಾನಸಭಾ ಕ್ಷೇತ್ರವಾರು, ಕಾಮಗಾರಿಗಳವಾರು ಸಂಪೂರ್ಣ ಮಾಹಿತಿ ನೀಡುವುದು)

## "ಹೊಸ ಕೊಳಗೇರಿ ನೀತಿ" ಯೋಜನೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೬೪೮ (೭೩೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ಹೊಸ ಕೊಳಗೇರಿ ನೀತಿ ಯೋಜನೆ"ಯನ್ನು ಯಾವಾಗ ಜಾರಿಗೆ ತರಲಾಯಿತು ; ಈ ಯೋಜನೆಯ ರೂಪುರೇಷೆಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಯು ಜಾರಿಯಾದಾಗಿನಿಂದ ಇದುವರೆವಿಗೂ ಮೀಸಲಿಟ್ಟ ಅನುದಾನವೆಷ್ಟು ; ಹಾಗೂ ಖರ್ಚು ಮಾಡಲಾದ ಅನುದಾನವೆಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಯನ್ವಯ ರಾಜ್ಯದಲ್ಲಿ ಕೊಳಗೇರಿ ಪ್ರದೇಶಗಳ ಸಮೀಕ್ಷೆಯನ್ನು ನಡೆಸಲಾಗಿದೆಯೇ ; ಹಾಗಿದ್ದಲ್ಲಿ, ಸಮೀಕ್ಷೆಯ ಪ್ರತಿ ನೀಡುವುದು ;

(ಈ) ರಾಜ್ಯದ ತಾಲ್ಲೂಕು ಕೊಳಗೇರಿ ಪ್ರದೇಶಗಳವಾರು ಅನುದಾನದ ಹಂಚಿಕೆಯಲ್ಲಿ ತಾರತಮ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಬೆಂಗಳೂರು ನಗರದಲ್ಲಿ ಬೀದಿ ನಾಯಿಗಳು ಹಾವಳಿ ಮಾಡುತ್ತಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೬೪೯ (೭೪೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚಿನ ದಿನಗಳಲ್ಲಿ ಬೆಂಗಳೂರು ನಗರದಲ್ಲಿ ಬೀದಿನಾಯಿ ಕಡಿತ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರಿ ಆಸ್ಪತ್ರೆಗಳಿಗೆ ರೇಬಿಸ್ ಲಸಿಕೆಯನ್ನು ಸರ್ಕಾರ ಅಗತ್ಯ ಪ್ರಮಾಣದಲ್ಲಿ ಪೂರೈಕೆ ಮಾಡುತ್ತಿಲ್ಲವೆಂಬುದು ನಿಜವೇ ;

(ಇ) ಹಾಗಿದ್ದಲ್ಲಿ, ಅದಕ್ಕೆ ಕಾರಣಗಳೇನು ;

(ಈ) ಕಳೆದ ೦೫ ವರ್ಷಗಳಲ್ಲಿ ದಾಖಲಾಗಿರುವ ಬೀದಿನಾಯಿ ಕಡಿತದ ಪ್ರಕರಣಗಳೆಷ್ಟು ;

(ಉ) ಬೀದಿನಾಯಿಗಳ ಜನನ ಪ್ರಮಾಣ ನಿಯಂತ್ರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಬೆಂಗಳೂರು ನಗರದ ವಸತಿ ಪ್ರದೇಶಗಳಲ್ಲಿ ಮಾಲಿನ್ಯಕಾರಕ ಕಾರ್ಖಾನೆಗಳ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೬೫೦ (೭೪೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರದಲ್ಲಿ ಅನೇಕ ಮಾಲಿನ್ಯಕಾರಕ ಕಾರ್ಖಾನೆಗಳು ವಸತಿ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅಂತಹ ಕಾರ್ಖಾನೆಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು ? (ಪೂರ್ಣ ವಿವರವನ್ನು ಒದಗಿಸುವುದು)

## ಬೇಗೂರು ಸರಗೂರು–ಬಿದರಹಳ್ಳಿ ರಸ್ತೆಗಳ ದುರಸ್ಥಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೫೧ (೭೮೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೆಗ್ಗಡದೇವನ ಕೋಟೆ ಹ್ಯಾಂಡ್ ಪೋಸ್ಟ್–ಎನ್. ಬೇಗೂರು ರಸ್ತೆ, ಸರಗೂರು–ಬಿದರಹಳ್ಳಿ ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೆಚ್ಚು ಸಾರ್ವಜನಿಕ ವಾಹನಗಳ ಓಡಾಟ ಇರುವ ಈ ರಸ್ತೆಗಳನ್ನು ಕೂಡಲೇ ಅಭಿವೃದ್ಧಿ ಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ; ಈ ರಸ್ತೆಗಳ ಅಭಿವೃದ್ಧಿಗೆ ಪ್ರಸಕ್ತ ಸಾಲಿನಲ್ಲಿ ಅನುದಾನ ಒದಗಿಸಲಾಗಿದೆಯೇ ? (ವಿವರಗಳನ್ನು ನೀಡುವುದು)

## ಕಲಬುರಗಿ ನಗರದ ಮುಖ್ಯ ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು):–**

೬೫೨ (೭೩೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ನಗರದಲ್ಲಿರುವ ಮುಖ್ಯ ರಸ್ತೆಗಳ ಅಭಿವೃದ್ಧಿಗಾಗಿ ಇದುವರೆಗೂ ಎಷ್ಟು ಹಣ ಖರ್ಚು ಮಾಡಲಾಗಿದೆ ;

(ಆ) ಈ ರಸ್ತೆ ಪಕ್ಕದಲ್ಲಿ ಚರಂಡಿ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಚರಂಡಿಗಳು ರಸ್ತೆಗಿಂತ ಎತ್ತರ ನಿರ್ಮಾಣ ಮಾಡಿರುವುದರಿಂದ ಮಳೆ ನೀರು ಚರಂಡಿಗೆ ಹರಿದು ಹೋಗದೆ ರಸ್ತೆ ಮೇಲೆ ಶೇಖರಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕಲಬುರಗಿ ಜಿಲ್ಲೆಯ ಘೋಷಿತ ಕೊಳಚೆ ಪ್ರದೇಶಗಳ ಬಗ್ಗೆ

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು) :–**

೬೫೩ (೭೩೧) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಗಳಲ್ಲಿರುವ ಘೋಷಿತ ಕೊಳಚೆ ಪ್ರದೇಶಗಳ ಸಂಖ್ಯೆ ಎಷ್ಟು ; (ಸ್ಥಳೀಯ ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ಇಲ್ಲಿ ವಾಸಿಸಿರುವ ನಿವಾಸಿಗಳ ಬೇಡಿಕೆ ಮೇಲೆ ಮನೆ ಯೋಜನೆಯಡಿಯಲ್ಲಿ ಅರ್ಜಿಗಳನ್ನು ಸಲ್ಲಿಸಿದ್ದಾರೆಯೇ ; ಎಷ್ಟು ಜನರಿಂದ ಅರ್ಜಿಗಳು ಸಲ್ಲಿಸಲ್ಪಟ್ಟಿವೆ ;

(ಇ) ಅರ್ಜಿ ಸಲ್ಲಿಸಿದವರಿಗೆ ಸೂರು ಒದಗಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. ೦103/250 ಪ್ರತಿಗಳು/20-07-2019